**Akashvani : Bangalore**
**National Bulletins In Kannada**
**16.10.2025 / 19.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

೧. ಆಂಧ್ರ ಪ್ರದೇಶದಲ್ಲಿ ೧೩ ಸಾವಿರದ ೪೩೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಚಾಲನೆ

೨. ಭಯೋತ್ಪಾದನೆ ವಿರುದ್ಧ ಸರ್ಕಾರದಿಂದ ಶೂನ್ಯ ಸಹಿಷ್ಣುತಾ ನೀತಿ ಅಳವಡಿಕೆ - ಕೇಂದ್ರ ಗೃಹ ಸಚಿವ ಅಮಿತ್ ಶಾ

೩. ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಚುರುಕು

೪. ವಿಶ್ವಸಂಸ್ಥೆ ಏಷ್ಯಾ ಪೆಸಿಫಿಕ್ ಜಾಗತಿಕ ಭೌಗೋಳಿಕ ಮಾಹಿತಿ ನಿರ್ವಹಣೆ ಪ್ರಾದೇಶಿಕ ಸಮಿತಿಯ ಸಹ ಅಧ್ಯಕ್ಷತೆಗೆ ಭಾರತ ಆಯ್ಕೆ

****************

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಆಂಧ್ರಪ್ರದೇಶದ ಕರ್ನೂಲ್‌ನಲ್ಲಿ ಸುಮಾರು ೧೩ ಸಾವಿರ ೪೩೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಿದರು. ಕೈಗಾರಿಕೆ, ವಿದ್ಯುತ್ ಪ್ರಸರಣ, ರಸ್ತೆಗಳು, ರೈಲ್ವೆ, ರಕ್ಷಣಾ ಉತ್ಪಾದನೆ ಹಾಗೂ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸೇರಿದಂತೆ ಪ್ರಮುಖ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಆಂಧ್ರಪ್ರದೇಶವು ಅಭಿವೃದ್ಧಿಯ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ. ಡಬಲ್-ಇಂಜಿನ್ ಸರ್ಕಾರದ ಬಲದೊಂದಿಗೆ, ರಾಜ್ಯವು ಅಭೂತಪೂರ್ವ ಬೆಳವಣಿಗೆಗೆ ಸಾಕ್ಷಿಯಾಗುತ್ತಿದೆ. ಶುದ್ಧ ಇಂಧನ ಮತ್ತು ವಿದ್ಯುತ್ ಲಭ್ಯತೆಯಲ್ಲಿ ಭಾರತ ತ್ವರಿತ ಪ್ರಗತಿ ಸಾಧಿಸಿದೆ. ಪ್ರತಿಯೊಂದು ಹಳ್ಳಿಗೂ ವಿದ್ಯುತ್ ತಲುಪಿದ್ದು, ತಲಾ ವಿದ್ಯುತ್ ಬಳಕೆ ೧ ಸಾವಿರದ ೪೦೦ ಯೂನಿಟ್‌ಗೆ ಏರಿದೆ ಎಂದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 32 ಸೆಕೆಂಡುಗಳು)**

ಕರ್ನೂಲನ್ನು ಭಾರತದ ಡ್ರೋನ್ ಕೇಂದ್ರವಾಗಿ ಸ್ಥಾಪಿಸಲು ರಾಜ್ಯದ ಪ್ರಯತ್ನವನ್ನು ಶ್ಲಾಘಿಸಿದ ಪ್ರಧಾನಿ ಡ್ರೋನ್ ಉದ್ಯಮ ಹಲವಾರು ಭವಿಷ್ಯದ ವಲಯಗಳಿಗೆ ಬಾಗಿಲು ತೆರೆಯುತ್ತದೆ. ಜಿಎಸ್‌ಟಿ ಸುಧಾರಣೆಯಿಂದ ರಾಜ್ಯಕ್ಕೆ ಹರಿದು ಬರುವ ಆರ್ಥಿಕ ಲಾಭದಿಂದ ಅಂದಾಜು ೮ ಸಾವಿರ ಕೋಟಿ ರೂಪಾಯಿ ಉಳಿತಾಯವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

****************

ನವದೆಹಲಿಯಲ್ಲಿ ನಡೆಯುತ್ತಿರುವ ಸೇನಾ ಮುಖ್ಯಸ್ಥರ ಸಮಾವೇಶದಲ್ಲಿ ಭಾಗವಹಿಸುತ್ತಿರುವ ವಿಶ್ವಸಂಸ್ಥೆಯ ಸೇನಾ ತುಕಡಿ ಸಹಾಯಕ ರಾಷ್ಟ್ರಗಳ ಮುಖ್ಯಸ್ಥರು ಮತ್ತು ಉಪ ಮುಖ್ಯಸ್ಥರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಭೇಟಿಯಾದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿಗಳು, ಪ್ರತಿನಿಧಿಗಳನ್ನು ಸ್ವಾಗತಿಸಿ, ಜಾಗತಿಕ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳುವಲ್ಲಿ ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳು ನೀಡಿದ ಮಹತ್ವದ ಕೊಡುಗೆಗಳನ್ನು ಶ್ಲಾಘಿಸಿದರು. ಶಾಂತಿಪಾಲನೆಯ ಪ್ರಯಾಣದಲ್ಲಿ, ಭಾರತವು ಲಿಂಗ ಸೇರ್ಪಡೆಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ. ಮಹಿಳಾ ಶಾಂತಿಪಾಲಕರು ಸ್ಥಳೀಯ ಸಮುದಾಯಗಳನ್ನು ಸಬಲೀಕರಣಗೊಳಿಸಿದ್ದಾರೆ ಮತ್ತು ವಿಶ್ವಾಸವನ್ನು ಬೆಳೆಸಿದ್ದಾರೆ ಎಂದು ಅವರು ತಿಳಿಸಿದರು.

****************

ಭ್ರಷ್ಟಾಚಾರ, ಅಪರಾಧ ಮತ್ತು ಭಯೋತ್ಪಾದನೆಯ ವಿರುದ್ಧ ಸರ್ಕಾರ ಶೂನ್ಯ ಸಹಿಷ್ಣುತೆ ನೀತಿಯನ್ನು ಅಳವಡಿಸಿಕೊಂಡಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪುನರುಚ್ಚರಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ದೇಶಭ್ರಷ್ಟರ ಹಸ್ತಾಂತರ-ಸವಾಲುಗಳು ಮತ್ತು ಕಾರ್ಯತಂತ್ರ ಕುರಿತ ಸಮ್ಮೇಳನವನ್ನು ಉದ್ಘಾಟಿಸಿ, ಮಾತನಾಡಿದ ಅವರು, ಎಲ್ಲಾ ಅಪರಾಧಿಗಳನ್ನು ಕಾನೂನಿನ ವ್ಯಾಪ್ತಿಗೆ ತರುವುದನ್ನು ಖಚಿತಪಡಿಸಿಕೊಳ್ಳಲು ಒಂದು ಬಲವಾದ ಕಾರ್ಯವಿಧಾನವನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅವರು ಹೇಳಿದರು. ಸರ್ಕಾರವು ೨೦೧೮ ರಲ್ಲಿ ದೇಶಭ್ರಷ್ಟ ಆರ್ಥಿಕ ಅಪರಾಧಿಗಳ ಕಾಯ್ದೆಯನ್ನು ಪರಿಚಯಿಸಿದೆ. ಇದು ದೇಶದಲ್ಲಿರುವ ದೇಶಭ್ರಷ್ಟರ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಅಧಿಕಾರಿಗಳಿಗೆ ಅಧಿಕಾರ ನೀಡುತ್ತದೆ. ಈ ಕಾಯ್ದೆ ಜಾರಿಗೆ ಬಂದ ಕೇವಲ ನಾಲ್ಕು ವರ್ಷಗಳಲ್ಲಿ ಎರಡು ಶತಕೋಟಿ ಡಾಲರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಪ್ರತಿಯೊಂದು ರಾಜ್ಯ ಸಿಬಿಐ ಸಹಯೋಗದೊಂದಿಗೆ ಒಂದು ಘಟಕವನ್ನು ಸ್ಥಾಪಿಸಬೇಕು ಎಂದು ಸೂಚಿಸಿದ ಸಚಿವರು,

ಅಂತಾರಾಷ್ಟ್ರೀಯ ಮಟ್ಟದಲ್ಲಿ ಪರಾರಿಯಾಗಿರುವವರನ್ನು ಬಂಧಿಸಲು ಸಿಬಿಐ ವಿಶೇಷ ಜಾಗತಿಕ ಕಾರ್ಯಾಚರಣೆ ಕೇಂದ್ರವನ್ನು ಸ್ಥಾಪಿಸಿದೆ, ಎಂದು ಶಾ ಹೇಳಿದರು.

****************

ಕಳೆದ ಎರಡು ದಿನಗಳಲ್ಲಿ ೨೫೮ ಎಡಪಂಥೀಯ ಉಗ್ರಗಾಮಿಗಳು ಹಿಂಸಾಚಾರವನ್ನು ತ್ಯಜಿಸಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ಛತ್ತೀಸ್‌ಗಢದಲ್ಲಿ ಇಂದು ೧೭೦, ನಿನ್ನೆ ೨೭ ಮಂದಿ ನಕ್ಸಲರು, ಶರಣಾಗಿದ್ದಾರೆ ಹಾಗೆಯೇ ಮಹಾರಾಷ್ಟ್ರದಲ್ಲಿ ನಿನ್ನೆ ೬೧ ಮಂದಿ ಮುಖ್ಯವಾಹಿನಿಗೆ ಮರಳಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ಕಳೆದ ವರ್ಷ ಛತ್ತೀಸ್‌ಗಢದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ, ಎರಡು ಸಾವಿರಕ್ಕೂ ಹೆಚ್ಚು ನಕ್ಸಲರು ಶರಣಾಗಿದ್ದಾರೆ, ಸುಮಾರು ೧ ಸಾವಿರದ ೮೦೦ ಜನರನ್ನು ಬಂಧಿಸಲಾಗಿದೆ ಮತ್ತು ರಾಜ್ಯದಲ್ಲಿ ನಾಲ್ಕುನೂರ ಐವತ್ತಕ್ಕೂ ಹೆಚ್ಚು ಜನರನ್ನು ನಿರ್ಮೂಲನೆ ಮಾಡಲಾಗಿದೆ ಎಂದು ಅವರು ಹೇಳಿದರು. ದೇಶದ ಸಂವಿಧಾನದ ಮೇಲೆ ನಂಬಿಕೆಯನ್ನು ವ್ಯಕ್ತಪಡಿಸಿ, ಹಿಂಸಾಚಾರವನ್ನು ತ್ಯಜಿಸುವ ನಕ್ಸಲರ ನಿರ್ಧಾರವನ್ನು ಸಚಿವರು ಶ್ಲಾಘಿಸಿದರು. ಒಂದು ಕಾಲದಲ್ಲಿ ಭಯೋತ್ಪಾದಕ ನೆಲೆಗಳಾಗಿದ್ದ ಛತ್ತೀಸ್‌ಗಢದ ಅಬುಜ್‌ಮಾರ್ ಮತ್ತು ಉತ್ತರ ಬಸ್ತಾರ್ ಅನ್ನು ನಕ್ಸಲ್ ಭಯೋತ್ಪಾದನೆಯಿಂದ ಮುಕ್ತಗೊಳಿಸಲಾಗಿದೆ ಎಂದು ಹೇಳಿದರು.

****************

ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ನಡುವಿನ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನ ಭಯೋತ್ಪಾದಕ ಸಂಘಟನೆಗಳಿಗೆ ಆಶ್ರಯ ನೀಡುತ್ತಿದ್ದು, ಭಯೋತ್ಪಾದಕ ಚಟುವಟಿಕೆಗಳನ್ನು ಪ್ರಾಯೋಜಿಸುತ್ತಿದೆ ಎಂಬುದು ಸ್ಪಷ್ಟವಾಗಿದೆ ಎಂದರು. ತನ್ನ ಆಂತರಿಕ ವೈಫಲ್ಯಗಳಿಗೆ ನೆರೆಹೊರೆಯವರನ್ನು ದೂಷಿಸುವುದು ಪಾಕಿಸ್ತಾನದ ಹಳೆಯ ಅಭ್ಯಾಸವಾಗಿದೆ. ಭಾರತ ಅಫ್ಘಾನಿಸ್ತಾನದ ಸಾರ್ವಭೌಮತ್ವ, ಪ್ರಾದೇಶಿಕ ಸಮಗ್ರತೆ ಮತ್ತು ಸ್ವಾತಂತ್ರಕ್ಕೆ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ರಣಧೀರ್ ಜೈಸ್ವಾಲ್ ( 29 ಸೆಕೆಂಡುಗಳು)**

****************

ಕೇಂದ್ರ ಸಂವಹನ ಮತ್ತು ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ಇಂದು ಸಂಸತ್ ಭವನದಲ್ಲಿ ಉಪರಾಷ್ಟ್ರಪತಿ ಸಿ ಪಿ ರಾಧಾಕೃಷ್ಣನ್ ಅವರನ್ನು ಭೇಟಿ

ಮಾಡಿದರು.  ಸಭೆಯಲ್ಲಿ, ಉಪರಾಷ್ಟ್ರಪತಿಯವರಿಗೆ ಸಂವಹನ ಸಚಿವಾಲಯ ಮತ್ತು ಈಶಾನ್ಯ ಪ್ರದೇಶಾಭಿವೃದ್ಧಿ ಸಚಿವಾಲಯದ ಪ್ರಮುಖ ಉಪಕ್ರಮಗಳು ಮತ್ತು ಭವಿಷ್ಯದ ಯೋಜನೆಗಳ ಬಗ್ಗೆ ವಿವರಿಸಲಾಯಿತು.

***************

ಮೊದಲ ಹಂತದ ಬಿಹಾರ ವಿಧಾನಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಲು ನಾಳೆ ಕೊನೆಯ ದಿನವಾಗಿರುವುದರಿಂದ ಬಿಹಾರದಲ್ಲಿ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಚುರುಕುಗೊಂಡಿದೆ. ಇದರೊಂದಿಗೆ ಚುನಾವಣಾ ಪ್ರಚಾರವೂ ಚುರುಕುಗೊಂಡಿದೆ. ಹಿರಿಯ ಬಿಜೆಪಿ ನಾಯಕ ಮತ್ತು ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಇಂದು ಮುಂಗೇರ್‌ನ ತಾರಾಪುರ ವಿಧಾನಸಭಾ ಕ್ಷೇತ್ರದಿಂದ ತಮ್ಮ ನಾಮಪತ್ರ ಸಲ್ಲಿಸಿದರು. ಆರ್‌ಜೆಡಿ ಅಧ್ಯಕ್ಷ ಲಾಲು ಪ್ರಸಾದ್ ಯಾದವ್ ಅವರ ಪುತ್ರ ತೇಜ್ ಪ್ರತಾಪ್ ಯಾದವ್ ಇಂದು ವೈಶಾಲಿ ಜಿಲ್ಲೆಯ ಮಹುವಾ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದರು. ಅವರು ಹೊಸ ಪಕ್ಷ ಜನಶಕ್ತಿ ಜನತಾದಳವನ್ನು ಸ್ಥಾಪಿಸಿದ್ದಾರೆ. ದಾನಾಪುರದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಎನ್‌ಡಿಎಯ ಡಬಲ್-ಎಂಜಿನ್ ಸರ್ಕಾರ ರಚನೆಯಾದ ಯಾವುದೇ ರಾಜ್ಯವು ಕಾನೂನು ಮತ್ತು ಸುವ್ಯವಸ್ಥೆಯಲ್ಲಿ ಅಭಿವೃದ್ಧಿ ಮತ್ತು ಸುಧಾರಣೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

***************

ಬಿಹಾರವನ್ನು ಅರಾಜಕತೆಯಿಂದ ಮುಕ್ತಗೊಳಿಸಲು ಎನ್‌ಡಿಎ ಸರ್ಕಾರ ಪರಿಣಾಮಕಾರಿಯಾಗಿ ಕೆಲಸ ಮಾಡಿದೆ ಎಂದು ಹಿರಿಯ ಬಿಜೆಪಿ ನಾಯಕ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಬಿಹಾರದ ದಾನಾಪುರ ವಿಧಾನಸಭಾ ಕ್ಷೇತ್ರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಉತ್ತರ ಪ್ರದೇಶ ಮತ್ತು ಬಿಹಾರ ರಾಜ್ಯಗಳು ಒಂದು ಪರಂಪರೆಯನ್ನು ಹಂಚಿಕೊಂಡಿವೆ ಎಂದು ಅವರು ಹೇಳಿದರು. ಪಾಟ್ನಾದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ಸಂಸದ ಅನುರಾಗ್ ಠಾಕೂರ್, ಬಿಹಾರವು ಅಭಿವೃದ್ಧಿಯಲ್ಲಿ ವೇಗವನ್ನು ಪಡೆದುಕೊಂಡಿದೆ. ಎನ್‌ಡಿಎ ಸರ್ಕಾರದ ಅಡಿಯಲ್ಲಿ ೫೦ ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ತಿಳಿಸಿದರು.

***************

೨೦೨೮ರವರೆಗೆ ೩ ವರ್ಷಗಳ ಅವಧಿಗೆ ವಿಶ್ವಸಂಸ್ಥೆಯ ಏಷ್ಯಾ ಮತ್ತು ಪೆಸಿಫಿಕ್ ಜಾಗತಿಕ ಭೌಗೋಳಿಕ ಮಾಹಿತಿ ನಿರ್ವಹಣೆ. ಯುಎನ್-ಜಿಜಿಐಎಂ-ಎಪಿ ಪ್ರಾದೇಶಿಕ ಸಮಿತಿಯ ಸಹ ಅಧ್ಯಕ್ಷತೆ ವಹಿಸಲು ಭಾರತವನ್ನು ಆಯ್ಕೆ ಮಾಡಲಾಗಿದೆ. ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ ತನ್ನ ಹೇಳಿಕೆಯಲ್ಲಿ, ಸಹ ಅಧ್ಯಕ್ಷತೆಗೆ ಭಾರತದ ಆಯ್ಕೆಯು, ನಾವೀನ್ಯತೆ ಸಾಮರ್ಥ್ಯ ವೃದ್ಧಿ ಮತ್ತು ಪ್ರಾದೇಶಿಕ ಸಹಯೋಗವನ್ನು ಮುನ್ನಡೆಸುವಲ್ಲಿ ಅದರ ಕೊಡುಗೆಯನ್ನು ಗುರುತಿಸುತ್ತದೆ ಎಂದು ತಿಳಿಸಿದೆ.

****************

ಕರ್ನಾಟಕದ ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲೂಕಿನ ಕೊಂಚಿಗೇರಿ ಗ್ರಾಮದಲ್ಲಿ ಮೆಣಸಿಕಾಯಿ ಪುಡಿ ಮತ್ತು ಫ್ಲೇಕ್ಸ್ ನ ಕೃಷಿ  ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಉದ್ಘಾಟಿಸಿದರು. ಬಳಿಕ  ಮಾತನಾಡಿದ ಅವರು, ದೇಶದ ೧೦೦ ಜಿಲ್ಲೆಗಳಲ್ಲಿ ಪ್ರಧಾನ ಮಂತ್ರಿ ಕೃಷಿ  ಧನ ದಾನ್ಯ ಯೋಜನೆ ಮೂಲಕ ಕೃಷಿ ಅಭಿವೃದ್ಧಿಗೆ ಅಗತ್ಯವಾದ ನೆರವು ನೀಡುತ್ತಿದೆ ಈ ವರ್ಷದಲ್ಲಿ ಮೆಣಸಿನಕಾಯಿ ಯಲ್ಲಿ ರಾಸಾಯನಿಕ ಅಂಶ ಇಲ್ಲದೆ ಬೆಳೆದರೆ ಮಾತ್ರ ಅಂತಾರಾಷ್ಟ್ರೀಯ ಮಾರುಕಟ್ಟೆ ದೊರೆಯಲಿದೆ. ಉತ್ತಮ ದರ ದೊರೆಯಲಿದೆ. ಅದಕ್ಕಾಗಿ ಕಲ್ಯಾಣ ಸಂಪದದ ಉತ್ಪನ್ನಗಳು ರಾಸಾಯನಿಕ ರಹಿತವಾಗಿ ನೀಡಲು ರೈತರು ಮುಂದೆ ಬನ್ನಿ ಎಂದು ಕರೆ ನೀಡಿದರು

****************

ಕಳೆದ ನಾಲ್ಕು ವರ್ಷಗಳಿಂದ ಭಾರತ ವಿಶ್ವದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ಮುಂದುವರೆದಿದ್ದು, ಮುಂದಿನ ೨೦ ವರ್ಷಗಳ ಕಾಲ ಇದೇ ವೇಗವನ್ನು ಉಳಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಕಳೆದ ದಶಕದಲ್ಲಿ ೨೫ ಕೋಟಿಗೂ ಹೆಚ್ಚು ಜನರನ್ನು ಬಡತನದಿಂದ ಹೊರತರಲಾಗಿದೆ, ನವ-ಮಧ್ಯಮ ವರ್ಗವು ದೇಶದ ಆರ್ಥಿಕತೆಯನ್ನು ಬಲಪಡಿಸುತ್ತಿದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ನಡೆದ ಭಾರತ-ಬ್ರೆಜಿಲ್ ವ್ಯವಹಾರ ಸಂವಾದವನ್ನುದ್ದೇಶಿಸಿ ಮಾತನಾಡಿದ ಅವರು, ಬ್ರೆಜಿಲ್ ಉಪಾಧ್ಯಕ್ಷ ಗೆರಾಲ್ಡೊ ಅಲ್ಕ್‌ಮಿನ್ ನೇತೃತ್ವದ ಬ್ರೆಜಿಲ್ ನಿಯೋಗದ ಪ್ರಸ್ತುತ ಭೇಟಿಯು ಎರಡೂ ದೇಶಗಳ ನಡುವಿನ ಪಾಲುದಾರಿಕೆಯನ್ನು ಹೆಚ್ಚಿಸಲು ಬಲವಾದ ಅಡಿಪಾಯವನ್ನು ಹಾಕುತ್ತದೆ ಎಂದು ಹೇಳಿದರು. ಹಲವಾರು ಮುಂದುವರಿದ ರಾಷ್ಟ್ರಗಳೊಂದಿಗೆ ಭಾರತ ಮುಕ್ತ ವ್ಯಾಪಾರ ಒಪ್ಪಂದಗಳನ್ನು

ಮಾಡಿಕೊಂಡಿರುವುದು, ಜಾಗತಿಕ ವ್ಯಾಪಾರದಲ್ಲಿ ಭಾರತದ ಕುರಿತು ಬೆಳೆಯುತ್ತಿರುವ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವರು ಒತ್ತಿ ಹೇಳಿದರು.

****************